ಉಪಾಧ್ಯಕ್ಷರು: ಎಲ್ಲರ ಸಮಸ್ಯೆಯನ್ನೂ ಬಗೆಹರಿಸುತ್ತೇವೆ ಎಂದು ಹೇಳಿದ್ದಾರೆ. ಈಗ ಸದನವನ್ನು ಸೋಮವಾರ ಬೆಳಗ್ಗೆ 11.00 ಗಂಟೆಗೆ ಸೇರುವಂತೆ ಮುಂದೂಡಲಾಗಿದೆ.

(ಸದನವು ಸಂಜೆ 4 ಗಂಟೆ 57 ನಿಮಿಷಕ್ಕೆ ಮುಕ್ತಾಯಗೊಂಡು ಪುನ: ದಿನಾಂಕ 12ನೇ ಫೆಬ್ರವರಿ 2007ರ ಸೋಮವಾರದಂದು ಬೆಳಗ್ಗೆ 11.00 ಗಂಟೆಗೆ ಸೇರಲು ನಿಶ್ಚಯಿಸಿತು)

* * * * *

ಅನುಬಂಧ – I

662 (1136) : ಶ್ರೀ ಅಕ್ಕಿ ಮಲ್ಲಿಕಾರ್ಜುನ ಸಹದೇವಪ್ಪ (ಕುಂದಗೋಳ) – ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಪಡಿತರ ಚೀಟಿಯನ್ನು ಹೊಂದಿದವರೆಷ್ಟು ;

ಆ) ಫಲಾನುಭವಿಗಳಿಗೆ ಪರಿಷ್ಕರಿಸಿದ ಪಡಿತರ ಚೀಟಿಯನ್ನು ಹಂಚಲಾಗಿದೆಯೇ ;

ಇ) ಪಡಿತರ ಚೀಟಿ ಹಂಚಿಕೆಯಲ್ಲಿ ಅವ್ಯವಹಾರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಈ) ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮವೇನು ?

ಶ್ರೀ ಗೋವಿಂದ ಎಂ. ಕಾರಜೋಳ (ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು) –

ಅ) ದಿನಾಂಕ: 5.2.2007 ರವರೆಗೆ ರಾಜ್ಯದಲ್ಲಿ ಪ್ರಸ್ತುತ ಪಡಿತರ ಚೀಟಿ ಕಾರ್ಡು ಹೊಂದಿರುವವರ ವಿವರ ಕೆಳಕಂಡಂತಿದೆ.

ಅನ್ನಪೂರ್ಣ	–	25,452
ಎಎವೈ	–	11,75,912
ಬಿಪಿಎಲ್	–	53,87,103
ಎಪಿಎಲ್	–	52,93,443
ಒಟ್ಟು	–	1,18,81,910

ಆ) ರಾಜ್ಯಾದ್ಯಂತ ಮನೆ ಮನೆ ಸಮೀಕ್ಷೆಯನ್ನು ಕೈಗೊಂಡು ಸಮೀಕ್ಷೆಯಲ್ಲಿ ಗುರುತಿಸಲಾದ ಫಲಾನುಭವಿಗಳಿಗೆ ಅರ್ಹತೆಗನುಗುಣವಾಗಿ ಅನ್ನಪೂರ್ಣ, ಅಂತ್ಯೋದಯ ಅನ್ನ, ಅಕ್ಷಯ, ಎಪಿಎಲ್ ತಾತ್ಕಾಲಿಕ ಪಡಿತರ ಕೂಪನ್‌ಗಳನ್ನು ವಿತರಿಸಲಾಗಿದೆ. ತಾತ್ಕಾಲಿಕ ಪಡಿತರ ಕೂಪನ್‌ಗಳನ್ನು ವಿತರಣೆ ಮಾಡಿದ ನಂತರ, ಪಡಿತರ ಚೀಟಿ ಪಡೆಯಲು ವಂಚಿತರಾದವರು / ಲೋಪದೋಷಗಳ ಬಗ್ಗೆ ಅಹವಾಲುಗಳನ್ನು ಸ್ವೀಕರಿಸಲಾಗಿದೆ. ಸದರಿ ಅಹವಾಲುಗಳನ್ನು ಪರಿಶೀಲಿಸಿ ಅರ್ಹತೆಗೆ ಅನುಗುಣವಾಗಿ ಪಡಿತರ ಚೀಟಿ ವಿತರಣೆಗೆ ಕ್ರಮ ವಹಿಸಲಾಗುತ್ತಿದೆ.

ಇ) ಇಲ್ಲ.

ಈ) ಸಾರ್ವಜನಿಕರಿಂದ ಸ್ವೀಕರಿಸಲಾಗಿರುವ ಅಹವಾಲುಗಳ ಪೂರ್ಣ ವಿಲೇವಾರಿಯ ನಂತರ ತಾತ್ಕಾಲಿಕ ಪಡಿತರ ಚೀಟಿಗಳ ವಿತರಣೆಗೆ ಕ್ರಮ ಕೈಗೊಳ್ಳಲಾಗುವುದು. ನಂತರ ಖಾಯಂ ಪಡಿತರ ಚೀಟಿಯನ್ನು ನೀಡಲಾಗುವುದು. ಮೇಲ್ಕಂಡ ಎಲ್ಲಾ ಕಾರ್ಯಕ್ರಮಗಳನ್ನು ಪೂರೈಸಲು ಕನಿಷ್ಠ 6 ತಿಂಗಳ ಕಾಲಾವಕಾಶ ಬೇಕಿರುತ್ತದೆ.

663 (1137) : ಶ್ರೀ ಅಶೋಕ ಗುರಪ್ಪ ಶಾಬಾದಿ (ಸಿಂಧಗಿ) – ಮಾನ್ಯ ತೋಟಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಳೆದ ಮೂರು ವರ್ಷಗಳಲ್ಲಿ ಸಿಂಧಗಿ ವಿಧಾನಸಭಾ ಕ್ಷೇತ್ರದಲ್ಲಿ ತೋಟಗಾರಿಕಾ ಇಲಾಖಾ ವತಿಯಿಂದ ವಿವಿಧ ಯೋಜನೆಯಡಿ ಮಂಜೂರಾಗಿರುವ ಹಣ ಎಷ್ಟು ; (ಯೋಜನೆವಾರು ವಿವರ ನೀಡುವುದು) ;

ಆ) ಈ ಯೋಜನೆಯಡಿ ಕೈಗೊಂಡಿರುವ ಕಾರ್ಯಕ್ರಮಗಳಾವುವು ; (ವಿವರ ನೀಡುವುದು) ;

ಇ) ಈ ಕಾರ್ಯಕ್ರಮಗಳು ಯಾವ ಹಂತದಲ್ಲಿವೆ ; ಯಾವಾಗ ಮುಕ್ತಾಯಗೊಳ್ಳಲಿದೆ ?

ಶ್ರೀ ಶಶಿಕಾಂತ ಅಕ್ಕಪ್ಪ ನಾಯಕ್ (ತೋಟಗಾರಿಕೆ ಸಚಿವರು) :

ಅ) ಕಳೆದ ಮೂರು ವರ್ಷಗಳಲ್ಲಿ ವಿವಿಧ ಯೋಜನೆಗಳಡಿ ಸಿಂಧಗಿ ತಾಲ್ಲೂಕಿಗೆ ಒಟ್ಟು ರೂ.159.246 ಲಕ್ಷ ಅನುದಾನ ಬಿಡುಗಡೆಯಾಗಿದೆ.

ಯೋಜನಾವಾರು ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.